All India Radio: Bangalore
National Bulletins In Kannada
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

27.05.2025 19.35 hrs

<><*<><>*><>

<u>ಮುಖ್ಯಾಂಶಗಳು</u>

- ಭಾರತದ ವಿರುದ್ಧದ ಪ್ರಾಕ್ಸಿ ಯುದ್ಧ ವಾಸ್ತವವಾಗಿ ಯೋಜಿತ ಯುದ್ಧ ತಂತ್ರವಾಗಿದೆ - ಪ್ರಧಾನಿ ನರೇಂದ್ರ ಮೋದಿ
- ಸರ್ವಪಕ್ಷ ನಿಯೋಗಗಳ ಜಾಗತಿಕ ಭೇಟಿ; ವಿಶ್ವಾದ್ಯಂತ ಭಯೋತ್ಪಾದನೆಯ ವಿರುದ್ಧ ಪ್ರತಿಧ್ವನಿಸುತ್ತಿರುವ ಭಾರತದ ಶೂನ್ಯ ಸಹಿಷ್ಣುತೆಯ ಸಂದೇಶ
- ದೇಶದ ಭವಿಷ್ಯದ ಶಿಕ್ಷಣಕ್ಕೆ ರಾಷ್ಟ್ರೀಯ ಶಿಕ್ಷಣ ನೀತಿ-೨೦೨೦ ಮಹತ್ವಪೂರ್ಣ -ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್
- ಐಪಿಎಲ್ ಟಿ-೨೦ ಕ್ರಿಕೆಟ್ ಫೈನಲ್‌ನಲ್ಲಿ 'ಆಪರೇಷನ್ ಸಿಂಧೂರ್' ವಿಜಯೋತ್ಸವ ಆಚರಿಸಲು ಬಿಸಿಸಿಐ ನಿರ್ಧಾರ
- ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫೀಲ್ಡಿಂಗ್ ಆಯ್ಕೆ

<><*<><>*><>

ಭಾರತದ ವಿರುದ್ಧದ ಪ್ರಾಕ್ಸಿ ಯುದ್ಧವು ವಾಸ್ತವವಾಗಿ ಯೋಜಿತ ಯುದ್ಧ ತಂತ್ರವಾಗಿದೆ ಎಂದು ಇತ್ತೀಚಿನ ಘಟನೆಗಳು ಸಾಬೀತುಪಡಿಸಿರುವುದಾಗಿ ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ಗುಜರಾತ್‌ನ ಗಾಂಧಿನಗರದ ಮಹಾತ್ಮ ಮಂದಿರದಲ್ಲಿಂದು ೫ ಸಾವಿರದ ೫೩೬ ಕೋಟಿ ರೂಪಾಯಿ ಮೌಲ್ಯದ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟನೆ ಮತ್ತು ಲೋಕಾರ್ಪಣೆ ನೆರವೇರಿಸಿ, ಮಾತನಾಡಿದ ಪ್ರಧಾನಿ, ಮೇ ೬ ರ ಘಟನೆಗಳ ನಂತರ, ಭಾರತವು ಇನ್ನು ಮುಂದೆ ಭಯೋತ್ಪಾದಕ ಚಟುವಟಿಕೆಯ ಪುರಾವೆಗಳನ್ನು ಒದಗಿಸುವ ಅವಶ್ಯಕತೆಯಿಲ್ಲ, ಈಗ ಗಡಿಯಾಚೆಗಿನವರೇ ಪುರಾವೆಗಳನ್ನು ಒದಗಿಸುತ್ತಿದ್ದಾರೆ ಎಂದು ಹೇಳಿದ್ದಾರೆ. ಹತ್ಯೆಗೀಡಾದ ಭಯೋತ್ಪಾದಕರಿಗೆ ಪಾಕಿಸ್ತಾನದಲ್ಲಿ ಸರ್ಕಾರಿ ಗೌರವಗಳನ್ನು ನೀಡಲಾಗುತ್ತಿತ್ತು, ಅವರ ಶವಪೆಟ್ಟಿಗೆಯ ಮೇಲೆ ರಾಷ್ಟ್ರಧ್ವಜವನ್ನು ಹೊದಿಸಿ ಪಾಕಿಸ್ತಾನಿ ಸೈನ್ಯವು ಗೌರವ ಸಲ್ಲಿಸುತ್ತಿತ್ತು. ಇವು ಪ್ರತ್ಯೇಕ ಭಯೋತ್ಪಾದಕ ಕೃತ್ಯಗಳಲ್ಲ, ಆದರೆ ಸಂಘಟಿತ ಮಿಲಿಟರಿ ಕಾರ್ಯತಂತ್ರದ ಭಾಗವಾಗಿದೆ ಎಂದು ಇದು ಸ್ಪಷ್ಟಪಡಿಸುತ್ತದೆ ಎಂದು ಅವರು ಹೇಳಿದರು. ಯುವ ಪೀಳಿಗೆಯು ರಾಷ್ಟ್ರೀಯ ಹಿತಾಸಕ್ತಿಗಳಿಗೆ ಹಾನಿ ಮಾಡುವ ಐತಿಹಾಸಿಕ ನಿರ್ಧಾರಗಳನ್ನು ಅಧ್ಯಯನ ಮಾಡುವಂತೆ ಪ್ರಧಾನಿ ಒತ್ತಾಯಿಸಿದರು. ೧೯೬೦ ರ ಸಿಂಧೂ ಜಲ ಒಪ್ಪಂದದ ಪ್ರಕಾರ ಜಮ್ಮು ಮತ್ತು ಕಾಶ್ಮೀರದಲ್ಲಿ ಅಣೆಕಟ್ಟುಗಳನ್ನು ಸ್ವಚ್ಛಗೊಳಿಸಲಾಗುವುದಿಲ್ಲ ಅಥವಾ ಹೂಳು ತೆಗೆಯಲಾಗುವುದಿಲ್ಲ ಎಂದು ಒಪ್ಪಿಕೊಳ್ಳಲಾಗಿತ್ತು. ಒಪ್ಪಂದದ ಪ್ರಕಾರ ಹೂಳು ತೆಗೆಯಲು ವಿನ್ಯಾಸಗೊಳಿಸಲಾದ ಕೆಳಗಿನ ಗೇಟ್‌ಗಳನ್ನು ಮುಚ್ಚಲು ಆದೇಶಿಸಲಾಗಿತ್ತು. ದಶಕಗಳವರೆಗೆ ಹಾಗೆಯೇ ಉಳಿಸಿಕೊಂಡ ಪರಿಣಾಮ, ಒಂದು ಕಾಲದಲ್ಲಿ ಪೂರ್ಣ ಸಾಮರ್ಥ್ಯದಲ್ಲಿ ನೀರನ್ನು ಹಿಡಿದಿಟ್ಟುಕೊಂಡಿದ್ದ ಜಲಾಶಯಗಳು ಈಗ ಕೇವಲ ೨ ಅಥವಾ ೩ ಪ್ರತಿಶತಕ್ಕೆ ಇಳಿದಿವೆ ಎಂದು ಪ್ರಧಾನಿ ತಿಳಿಸಿದರು. ಭಾರತವನ್ನು ವಿಶ್ವದ ಅಗ್ರ ಮೂರು ಆರ್ಥಿಕತೆಗಳಲ್ಲಿ ಒಂದನ್ನಾಗಿ ಮಾಡಲು ಶ್ರೇಣಿ ೨ ಮತ್ತು ಶ್ರೇಣಿ ೩ ನಗರಗಳ ಆರ್ಥಿಕ ಅಭಿವೃದ್ಧಿ ಅತ್ಯಂತ ಮುಖ್ಯವಾಗಿದೆ. ದೇಶವಾಸಿಗಳು 'ಮೇಕ್ ಇನ್ ಇಂಡಿಯಾ' ಉತ್ಪನ್ನಗಳನ್ನು ಬಳಸಬೇಕೆಂದು ಅವರು ಕರೆ ನೀಡದರು.

<><*<><>*><>

ಭಯೋತ್ಪಾದನೆಯ ವಿರುದ್ಧ ಶೂನ್ಯ ಸಹಿಷ್ಣುತೆಯ ಭಾರತದ ಸಂದೇಶ ವಿಶ್ವಾದ್ಯಂತ ಪ್ರತಿಧ್ವನಿಸುತ್ತಿದೆ, ಭಾರತದ ಬಹುಪಕ್ಷೀಯ ನಿಯೋಗಗಳು ಪಾಕಿಸ್ತಾನದ ಗಡಿಯಾಚೆಗಿನ ಭಯೋತ್ಪಾದನೆಯನ್ನು ಮತ್ತಷ್ಟು ಬಹಿರಂಗಪಡಿಸಲು ವಿವಿಧ ದೇಶಗಳಲ್ಲಿನ ವಿಶ್ವ ನಾಯಕರು, ಸಂಸದರು, ಚಿಂತಕರ ಚಾವಡಿಗಳು, ಮಾಧ್ಯಮ ಮತ್ತು ನಾಗರಿಕ ಸಮಾಜದೊಂದಿಗೆ ಸತತವಾಗಿ ಸಂವಹನ ನಡೆಸುತ್ತಿವೆ.

ಜೆಡಿ (ಯು) ಸಂಸದ ಸಂಜಯ್ ಝಾ ನೇತೃತ್ವದ ಸರ್ವಪಕ್ಷ ನಿಯೋಗವು ಸಿಂಗಾಪುರದ ವಿದೇಶಾಂಗ ಸಚಿವರು, ಸಂಸದರು, ವಾಣಿಜ್ಯ ಮಂಡಳಿಯ ಪ್ರತಿನಿಧಿಗಳು ಮತ್ತು ಆ ದೇಶದ ವ್ಯಾಪಾರ ನಾಯಕರೊಂದಿಗೆ ಸಂವಾದ ನಡೆಸಿದೆ. ಭಾರತವು ಶಾಂತಿಪ್ರಿಯ ರಾಷ್ಟ್ರವಾಗಿದ್ದು, ಯಾವುದೇ ಭಯೋತ್ಪಾದನಾ ಕೃತ್ಯವನ್ನು ಪಾಕಿಸ್ತಾನದಿಂದ ಯುದ್ಧ ಕೃತ್ಯವೆಂದು ಪರಿಗಣಿಸಲಾಗುತ್ತದೆ ಎಂದು ಪುನರುಚ್ಚರಿಸಿದೆ. ಡಿಎಂಕೆ ಸಂಸದೆ ಕನಿಮೋಳಿ ನೇತೃತ್ವದ ಮತ್ತೊಂದು ನಿಯೋಗವು ಲುಬ್ಲ್ಜಾನಾದಲ್ಲಿ ಸ್ಲೊವೇನಿಯಾದ ರಾಷ್ಟ್ರೀಯ ಮಂಡಳಿಯ ಅಧ್ಯಕ್ಷ ಮಾರ್ಕೊ ಲೋಟ್ರಿಕ್ ಅವರನ್ನು ಭೇಟಿಯಾಗಿ, ಜಾಗತಿಕ ಶಾಂತಿಯನ್ನು ಉತ್ತೇಜಿಸುವಲ್ಲಿ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಶಾಶ್ವತವಲ್ಲದ ಸದಸ್ಯರಾಗಿ ಸ್ಲೊವೇನಿಯಾದ ಪಾತ್ರವನ್ನು ಶ್ಲಾಘಿಸಿದರು. ಭಾರತವು ಸ್ಲೊವೇನಿಯಾಗೆ ಏಷ್ಯಾದಲ್ಲಿ ಎರಡನೇ ಅತಿದೊಡ್ಡ ಪಾಲುದಾರ ರಾಷ್ಟ್ರ ಮಾತ್ರವಲ್ಲದೆ ಇಡೀ ಯುರೋಪಿಯನ್ ಒಕ್ಕೂಟಕ್ಕೆ ಅತ್ಯಂತ ಪ್ರಮುಖ ಪಾಲುದಾರ ಎಂದು ಮಾರ್ಕೊ ಲೋಟ್ರಿಕ್ ಹೇಳಿದರು. ಬಿಜೆಪಿ ಸಂಸದ ಬೈಜಯಂತ್ ಪಾಂಡಾ ನೇತೃತ್ವದ ಮತ್ತೊಂದು ನಿಯೋಗ, ಕುವೈತ್‌ನಲ್ಲಿ ವಾಸಿಸುವ ಭಾರತೀಯ ಸಮುದಾಯದೊಂದಿಗೆ ಸಂವಾದ ನಡೆಸಿ, ಪಾಕಿಸ್ತಾನವು ಐಎಂಎಫ್, ಅಮೆರಿಕ ಮತ್ತು ಗಲ್ಫ್ ದೇಶಗಳಿಂದ ಪಡೆದ ಸಹಾಯದ ಹಣವನ್ನು ದುರುಪಯೋಗಪಡಿಸಿಕೊಂಡಿದೆ ಮತ್ತು ಅಭಿವೃದ್ಧಿಗೆ ಹಣವನ್ನು ಬಳಸುವ ಬದಲು ಇಸ್ಲಾಮಾಬಾದ್ ಅದನ್ನು ಭಯೋತ್ಪಾದನೆಯನ್ನು ಬೆಳೆಸಲು ಬಳಸಿದೆ ಎಂದು ದೂರಿದರು.  ಫ್ರಾನ್ಸ್‌ನಲ್ಲಿರುವ ಬಿಜೆಪಿ ಸಂಸದ ರವಿಶಂಕರ್ ಪ್ರಸಾದ್ ನೇತೃತ್ವದ ನಿಯೋಗ, ಪ್ಯಾರಿಸ್‌ನಲ್ಲಿ ಫ್ರೆಂಚ್ ಪತ್ರಕರ್ತರೊಂದಿಗೆ ಸಂವಾದ ನಡೆಸಿತು.

ಧ್ವನಿ; ರವಿಶಂಕರ್ ಪ್ರಸಾದ್ ( ೨೬ ಸೆಕೆಂಡ್ಸ್)

ಭಯೋತ್ಪಾದನೆಗೆ ಪಾಕಿಸ್ತಾನದ ಬೆಂಬಲವನ್ನು ಬಹಿರಂಗಪಡಿಸಲು ಇತರ ನಿಯೋಗಗಳು ವಿವಿಧ ದೇಶಗಳ ನಾಯಕತ್ವದೊಂದಿಗೆ ನಿರಂತರ ಸಭೆಗಳನ್ನು ನಡೆಸುತ್ತಿವೆ.

**<><*<><>*><>**

ದೇಶದಲ್ಲಿ ಭವಿಷ್ಯದ ಶಿಕ್ಷಣಕ್ಕಾಗಿ, ರಾಷ್ಟ್ರೀಯ ಶಿಕ್ಷಣ ನೀತಿ-೨೦೨೦ ಮಹತ್ವದ್ದಾಗಿದೆ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದ್ದಾರೆ.  ನವದೆಹಲಿಯಲ್ಲಿಂದು ನಡೆದ ಶಿಕ್ಷಣ ಸಮಾವೇಶ ಒಂದರಲ್ಲಿ ಮಾತನಾಡಿದ ಸಚಿವರು, ರಾಷ್ಟ್ರೀಯ ಶಿಕ್ಷಣ ನೀತಿಯು ದೂರದೃಷ್ಟಿಯ ಚೌಕಟ್ಟಾಗಿ ಹೊರಹೊಮ್ಮಿದ್ದು, ಭಾರತದಲ್ಲಿ ಕಲಿಕೆಯ ಭವಿಷ್ಯವನ್ನು ರೂಪಿಸುತ್ತಿದೆ ಎಂದು ಒತ್ತಿ ಹೇಳಿದರು. ಮೂಲಸೌಕರ್ಯ, ಒಳಗೊಳ್ಳುವಿಕೆ ಮತ್ತು ಆಧುನೀಕರಣದ ಮೇಲೆ ಗಮನ ಹರಿಸುವ ಮೂಲಕ ಭಾರತ, ಶಿಕ್ಷಣ ಕ್ಷೇತ್ರದಲ್ಲಿ ಗಮನಾರ್ಹ ಪ್ರಗತಿ ಸಾಧಿಸಿದೆ ಎಂದು ಅವರು ತಿಳಿಸಿದರು. ಶಿಕ್ಷಣವು, ಯಾವಾಗಲೂ ಭಾರತದ ಯುವಕರಿಗೆ ಪ್ರಮುಖ ಆಧಾರಸ್ತಂಭ ಮತ್ತು ಪ್ರಮುಖ ಆಕರ್ಷಣೆಯಾಗಿದೆ. ಎನ್‌ಇಪಿ-೨೦೨೦, ರಾಷ್ಟ್ರದಲ್ಲಿ ಶಿಕ್ಷಣದ ಭವಿಷ್ಯದ ಮೇಲೆ ಪ್ರಭಾವ ಬೀರುವ ಮುಂದಾಲೋಚನೆಯ ಚೌಕಟ್ಟಾಗಿ ಅಭಿವೃದ್ಧಿಗೊಂಡಿದೆ. ದೇಶವು, ೫ ರಿಂದ ೨೪ ವರ್ಷದೊಳಗಿನ ಸುಮಾರು ೩೦ ಕೋಟಿ ವಿದ್ಯಾರ್ಥಿಗಳನ್ನು ಹೊಂದಿದ್ದು, ಇದು ಭಾರತದಲ್ಲಿ ಶೈಕ್ಷಣಿಕ ಸುಧಾರಣೆಗಳ ಮಹತ್ವವನ್ನು ತಿಳಿಸುತ್ತದೆ ಎಂದು ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದರು.

**<><*<><>*><>**

ಕೇಂದ್ರೀಯ ನೇರ ತೆರಿಗೆ ಮಂಡಳಿ - ಸಿಬಿಡಿಟಿ, ಆದಾಯ ತೆರಿಗೆ ರಿಟರ್ನ್ಸ್ ಸಲ್ಲಿಸುವ ಕೊನೆಯ ದಿನಾಂಕವನ್ನು ಜುಲೈ ೩೧ ರಿಂದ ಸೆಪ್ಟೆಂಬರ್ ೧೫ ರವರೆಗೆ ವಿಸ್ತರಿಸಿದೆ. ಈ ವಿಸ್ತರಣೆಯು, ಐಟಿಆರ್ ಫಾರ್ಮ್‌ಗಳಲ್ಲಿನ ಗಮನಾರ್ಹ ಪರಿಷ್ಕರಣೆಗಳು, ಸಿಸ್ಟಮ್ ಅಭಿವೃದ್ಧಿಯ ಕಾರಣದಿಂದಾಗಿ ಜನರಿಗೆ ಹೆಚ್ಚಿನ ಸಮಯ ದೊರೆಯುತ್ತದೆ ಎಂದು ಮಂಡಳಿ ತಿಳಿಸಿದೆ. ಇದು ಎಲ್ಲರಿಗೂ ಸುಗಮ ಮತ್ತು ಹೆಚ್ಚು ನಿಖರವಾದ ಫೈಲಿಂಗ್ ಅನುಭವವನ್ನು ಖಚಿತಪಡಿಸುತ್ತದೆ. ಈ ವಿಸ್ತರಣೆಯು, ಪಾಲುದಾರರ ಕಳವಳಗಳನ್ನು ತಗ್ಗಿಸುತ್ತದೆ ಮತ್ತು ಅನುಸರಣೆಗೆ ಸಾಕಷ್ಟು ಸಮಯವನ್ನು ಒದಗಿಸುತ್ತದೆ. ಇದರಿಂದಾಗಿ ರಿಟರ್ನ್ ಫೈಲಿಂಗ್ ಪ್ರಕ್ರಿಯೆಯ ಸಮಗ್ರತೆ ಮತ್ತು ನಿಖರತೆಯನ್ನು ಖಚಿತಪಡಿಸುತ್ತದೆ ಎಂದು ನಿರೀಕ್ಷಿಸಲಾಗಿದೆ.

<><*<><>*><>

ಜೂನ್ ೩ ರಂದು ಅಹಮದಾಬಾದ್‌ನಲ್ಲಿ ಜರುಗಲಿರುವ ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-೧೮ರ ಫೈನಲ್ ಪಂದ್ಯವನ್ನು ಭಾರತೀಯ ಸೈನಿಕರಿಗೆ ಅರ್ಪಿಸಲು ಬಿಸಿಸಿಐ ನಿರ್ಧರಿಸಿದೆ. ಐಪಿಎಲ್ ಫೈನಲ್ ಪಂದ್ಯಕ್ಕೂ ಮುನ್ನ 'ಆಪರೇಷನ್ ಸಿಂಧೂರ್' ವಿಜಯೋತ್ಸವ ಆಚರಿಸಲು ತೀರ್ಮಾನಿಸಲಾಗಿದೆ. ಸಮಾರೋಪ ಸಮಾರಂಭಕ್ಕೆ ಭಾರತೀಯ ಕ್ರಿಕೆಟ್ ಆಡಳಿತ ಮಂಡಳಿಯು ರಕ್ಷಣಾ ಸಿಬ್ಬಂದಿ ಮುಖ್ಯಸ್ಥರನ್ನು ಹಾಗೂ ಭೂಸೇನೆ, ನೌಕಾಪಡೆ ಮತ್ತು ವಾಯುಪಡೆಯ ಮುಖ್ಯಸ್ಥರನ್ನು ಆಹ್ವಾನಿಸಿದೆ ಎಂದು ಬಿಸಿಸಿಐ ಕಾರ್ಯದರ್ಶಿ ದೇವಜಿತ್ ಸೈಕಿಯಾ ತಿಳಿಸಿದ್ದಾರೆ. ಐಪಿಎಲ್ ಫೈನಲ್ ಪಂದ್ಯದ ಆರಂಭಕ್ಕೂ ಮುನ್ನ ಮಿಲಿಟರಿ ಬ್ಯಾಂಡ್‌ನ ಪ್ರದರ್ಶನ ನಡೆಯಲಿದೆ.

<><*<><>*><>

ಲಕ್ನೋದ ಏಕಾನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಲಕ್ನೋ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ. ಅಂಕಪಟ್ಟಿಯ ಅಗ್ರ ಎರಡರ ಸ್ಥಾನವನ್ನು ಖಚಿತಪಡಿಸಿಕೊಳ್ಳಲು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ಈ ಪಂದ್ಯ ನಿರ್ಣಾಯಕವಾಗಿದೆ. ಪ್ರಸ್ತುತ ಆರ್.ಸಿ.ಬಿ. ಅಂಕ ಪಟ್ಟಿಯಲ್ಲಿ ಮೂರನೇ ಸ್ಥಾನದಲ್ಲಿದೆ. ಜೈಪುರದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್‌ನ ನಿರ್ಣಾಯಕ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡವನ್ನು ೭ ವಿಕೆಟ್‌ಗಳಿಂದ ಸೋಲಿಸುವ ಮೂಲಕ ಪಂಜಾಬ್ ಕಿಂಗ್ಸ್ ತಂಡವು ಅಗ್ರ-೨ರಲ್ಲಿ ಮತ್ತು ಕ್ವಾಲಿಫೈಯರ್ ೧ ರಲ್ಲಿ ಸ್ಥಾನವನ್ನು ಖಚಿತ ಪಡಿಸಿಕೊಂಡಿದೆ.

<><*<><>*><>

ಸಿಂಗಾಪುರ ಓಪನ್ ಸೂಪರ್ ೭೫೦ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿಂದು ಎರಡು ಬಾರಿಯ ಒಲಿಂಪಿಕ್ ಪದಕ ವಿಜೇತೆ ಪಿವಿ ಸಿಂಧು ಮತ್ತು ಎಚ್‌ಎಸ್ ಪ್ರಣಯ್ ಭಾರತಕ್ಕೆ ಅಪರೂಪದ ಧನಾತ್ಮಕ ಫಲಿತಾಂಶಗಳನ್ನು ನೀಡಿದ್ದಾರೆ. ಪ್ರಣಯ್ ಡೆನ್ಮಾರ್ಕ್‌ನ ರಾಸ್ಮಸ್ ಗೆಮ್ಕೆ ಅವರನ್ನು ಸೋಲಿಸಿ ಎರಡನೇ ಸುತ್ತಿಗೆ ಮುನ್ನಡೆಯುವ ಮೂಲಕ ಪುರುಷರ ಸಿಂಗಲ್ಸ್‌ನಲ್ಲಿ ಭಾರತದ ಭರವಸೆಯನ್ನು ಜೀವಂತವಾಗಿರಿಸಿದರು. ನಾಳೆ ನಡೆಯಲಿರುವ ಎರಡನೇ ಸುತ್ತಿನಲ್ಲಿ ಪ್ರಣಯ್, ಫ್ರಾನ್ಸ್‌ನ ಕ್ರಿಸ್ಟೊ ಪೊಪೊವ್ ಅವರನ್ನು ಎದುರಿಸಲಿದ್ದಾರೆ. ಕೆನಡಾದ ವೆನ್ ಯು ಜಾಂಗ್ ವಿರುದ್ಧ ಜಯ ಗಳಿಸಿ, ಸಿಂಧು ಎರಡನೇ ಸುತ್ತಿಗೆ ಪ್ರವೇಶಿಸಿದರು. ಪಿ.ವಿ.ಸಿಂಧೂ ಎರಡನೇ ಸುತ್ತಿನಲ್ಲಿ ಟೋಕಿಯೊ ಒಲಿಂಪಿಕ್ಸ್ ಚಿನ್ನದ ಪದಕ ವಿಜೇತೆ ಮತ್ತು ಪ್ರಸ್ತುತ ವಿಶ್ವದ ೫ ನೇ ಶ್ರೇಯಾಂಕಿತ ಚೀನಾದ ಚೆನ್ ಯು ಫೀ ಅವರನ್ನು ಎದುರಿಸಲಿದ್ದು, ಅವರಿಗೆ ಇದು ಕಠಿಣ ಹೋರಾಟವಾಗಿರಲಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>